## ಹೆಚ್ಚುವರಿ ಸಿವಿಲ್ ನ್ಯಾಯಾದೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ಕುಂದಾಪುರ

ಸಿಸಿ ನಂಬ್ರ: **1603/2018**

ಸಿಡಬ್ಲ್ಯೂ-**4** ಪಿಡಬ್ಲ್ಯೂ- **4**

ದಿನಾಂಕ: 02-03-2023

| | | |
|---|---|---|
| ಸಾಕ್ಷಿದಾರರ ಹೆಸರು | : | ಕಾರ್ತಿಕ್ |
| ತಂದೆಯ ಹೆಸರು | : | ಸದಾನಂದ ಹೆಗ್ಡೆ |
| ಪ್ರಾಯ | : | 32 ವರ್ಷ |
| ಉದ್ಯೋಗ | : | ಖಾಸಗಿ ಉದ್ಯೋಗ |
| ವಾಸ | : | ವಡೇರಹೋಬಳಿ |

ಪ್ರಮಾಣ ವಚನ ಮಾಡಿಸಲಾಯಿತು

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ

ಚಾಸಾ-1 ನನಗೆ ಸಂಬಂಧಿಕರು . 2018 ರಲ್ಲಿ ಬಸ್ರೂರು ಮೂರುಕೈಯಲ್ಲಿರುವ ನಮ್ಮ ಮನೆಯಲ್ಲಿ ನಿಪಿ-2 ಮತ್ತು 3 ಕ್ಕೆ ಸಹಿ ಮಾಡಿರುತ್ತೇನೆ. ಕಾರು ಕಳ್ಳತನಕ್ಕೆ ಸಂಬಂಧಪಟ್ಟಂತೆ ಸಹಿ ಮಾಡುವಂತೆ ಪೊಲೀಸರು ಕೇಳಿಕೊಂಡ ಮೇರೆಗೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಗಳು ತಕ್ಷೀರು ಮಹಜರು ಮತ್ತು ಸ್ವತ್ತು ಸ್ವಾಧೀನತಾ ಮಹಜರು ಆಗಿದ್ದು ಅವುಗಳನ್ನು ಈಗಾಗಲೇ ನಿಪಿ-2 ಮತ್ತು 3 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಮತ್ತು 3(ಬಿ) ಎಂದು ಗುರುತಿಸಲಾಯಿತು. ಸಹಿ ಮಾಡಿದ ಸಮಯ ಹೇಳಲು ಬರುವುದಿಲ್ಲ. ಪೊಲೀಸರು ನನ್ನ ಸಮಕ್ಷಮದಲ್ಲಿ ಯಾವುದೇ ಕಾರನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ನಿಪಿ-2 ಮತ್ತು 3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಹೇಳಿಕೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಪ್ರತಿಕೂಲ ಸಾಕ್ಷಿ ಎಂದು ವಿನಂತಿಸಿಕೊಂಡಿದ್ದರಿಂದ ಅದರ ಸತ್ಯಾಸತ್ಯತೆಯನ್ನು ಮನಗಂಡು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಸಹಾಯಕ ಸರ್ಕಾರಿ ಅಭಿಯೋಜಕರಿಗೆ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು

ಪಾಟಿ ಸವಾಲು: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ

ದಿನಾಂಕ:23-11-2017 ರಂದು ಕುಂದಾಪುರ ತಾಲೂಕು ಹಂಗಳೂರು ಗ್ರಾಮದಲ್ಲಿರುವ ಚಾಸಾ-

1 ರವರ ಮನೆಯ ಅವರಣಕ್ಕೆ ಬಂದು ಚಾಸಾ-1 ತೋರಿಸಿದಂತೆ ಮಧ್ಯಾಹ್ನ 4 ಗಂಟೆಯಿಂದ ಗಂಟೆಯವರೆಗೆ ನನ್ನ ಮತ್ತು ಚಾಸಾ-3 ರವರ ಸಮಕ್ಷಮದಲ್ಲಿ ಸ್ಥಳ ಮಹಜರು ಮಾಡಿರುತ್ತಾರೆಂದರೆ ಸರಿಯಲ್ಲ. ಸದರಿ ಸ್ಥಳ ಮಹಜರನ್ನು ನಿಪಿ-2 ರಂತೆ ಬರೆದು ಓದಿ ನೋಡಿ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ.

ದಿಃ 11-01-2018 ರಂದು ಕುಂದಾಪುರ ವೃತ್ತ ಕಚೇರಿಯ ಹಿಂಭಾಗದಲ್ಲಿ ಬೆಳಿಗ್ಗೆ 10 ಗಂಟೆಗೆ ನನ್ನನ್ನು ಮತ್ತು ಚಾಸಾ-5 ರವರನ್ನು ಕರೆಯಿಸಿ ನಮ್ಮ ಸಮಕ್ಷಮದಲ್ಲಿ ಚಾಸಾ-1 ರವರು ಹಾರಜು ಪಡಿಸಿದ ಕಾರನ್ನು ಮಹಜರು ಮಾಡಿ ಜಪಿತ ಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಿಪಿ-3 ರಂತೆ ಮಹಜರು ತಯಾರಿಸಿ ಓದಿ ಹೇಳಿ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ. ನಿಪಿ-2 ಮತ್ತು 3 ರ ಸಂಗತಿಗಳು ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಕೆ.ಎಂ.ಐ .ರವರಿಂದ

(ಆರೋಪಿತರ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

ಮರು ವಿಚಾರಣೆಃ ಇಲ್ಲ

ಓದಿ ಹೇ. ಕೇ. ಸರಿ ಇದೆ.

ನನ್ನ ಹೇ. ಮೇ. ಬೆ. ಮಾಡಲಾಗಿದೆ

ಹೆಚ್ಚುವರಿ ಸಿವಿಲ್ ನ್ಯಾಯಾದೀಶರು
ಮತ್ತು ಜೆ.ಎಂ.ಎಫ್.ಸಿ. ಕುಂದಾಪುರ. C/c